# ಮೂವರ ಅನರ್ಹತೆ ಅಧಿಸೂಚನೆ ಪ್ರಕಟ

ಬೆಂಗಳೂರು: ರಮೇಶ್ ಜಾರಕಿಹೊಳಿ, ಮಹೇಶ್ ಕುಮಟಳ್ಳಿ ಹಾಗೂ ಆರ್.ಶಂಕರ್ ಅವರು ಅನರ್ಹಗೊಂಡಿರುವ ಬಗ್ಗೆ ರಾಜ್ಯ ಸರ್ಕಾರದಿಂದ ಅಧಿಕೃತ ಅಧಿಸೂಚನೆ ಪ್ರಕಟಿಸಲಾಗಿದೆ. ರಾಜ್ಯ ವಿಧಾನಸಭೆ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿಯವರು ಅಧಿಕೃತ ಅಧಿಸೂಚನೆ ಹೊರಡಿಸಿದ್ದಾರೆ. ಗೋಕಾಕ್ ಶಾಸಕ ರಮೇಶ್ ಜಾರಕಿಹೊಳಿ ಹಾಗೂ ಮಹೇಶ್ ಕುಮಟಳ್ಳಿ ಅವರ ಅನರ್ಹತೆ ಹಾಗೂ ರಾಣೆಬೆನ್ನೂರು ಶಾಸಕ ಆರ್. ಶಂಕರ್ ಅವರ ಅನರ್ಹತೆ ಬಗ್ಗೆ ಪ್ರತ್ಯೇಕವಾಗಿ ಅಧಿಸೂಚನೆ ಹೊರಡಿಸಿದ್ದಾರೆ. ಸಂವಿಧಾನದ 10ನೇ ಪರಿಚ್ಛೇದದ ಅನ್ವಯ ಪಕ್ಷಾಂತರ ನಿಷೇಧ ಕಾಯ್ದೆ ಅಡಿಯಲ್ಲಿ ಜುಲೈ 25 ರಿಂದಲೇ ರಾಜ್ಯ ವಿಧಾನಸಭೆಯ ಸದಸ್ಯತ್ವದಿಂದ ಅನರ್ಹರಾಗಿದ್ದು 15ನೇ ವಿಧಾನಸಭೆಯ ಪೂರ್ಣ ಅವಧಿಗೆ ಅವರನ್ನು ಅನರ್ಹಗೊಳಿಸಲಾಗಿದೆ ಎಂದು ಅಧಿಸೂಚನೆಯಲ್ಲಿ ಪ್ರಕಟಿಸಲಾಗಿದೆ. ಈ ಮೂಲಕ ಕರ್ನಾಟಕ ವಿಧಾನಸಭೆಯಲ್ಲಿ ಮೂರು ಸ್ಥಾನಗಳು ಖಾಲಿಯಾಗಿವೆ ಎಂದು ಆದೇಶದಲ್ಲಿ ಅವರು ತಿಳಿಸಿದ್ದಾರೆ.